**ಕಾರ್ಯದರ್ಶಿ ಹಾಗೂ ಖಜಾಂಚಿಗಳ ಕಛೇರಿ, ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ಘಟಕ, ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ನಿಧಿ, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆಂಪೇಗೌಡ ರಸ್ತೆ, ಬೆಂಗಳೂರು-2.**

**ದೂರವಾಣಿ : 080-22483434**

ಸಂಖ್ಯೆ: ಶಿಕನಿ/09/ಆ2/ಉ.ವ್ಯಾ/09/2017-18 ದಿನಾಂಕ 14.09.2017

# ಪತ್ರಿಕಾ ಪ್ರಕಟಣೆ

2017-18 ನೇ ಶೈಕ್ಷಣಿಕ ಸಾಲಿನಲ್ಲಿ ವ್ಯಾಸಂಗ ಮಾಡುತ್ತಿರುವ ಶಿಕ್ಷಕರ ಮಕ್ಕಳ ಉನ್ನತ ವ್ಯಾಸಂಗಕ್ಕೆ ಧನಸಹಾಯ ನೀಡುವ ಸಲುವಾಗಿ ರಾಷ್ಟ್ರೀಯ ಶಿಕ್ಷಕರ ಕಲ್ಯಾಣ ಪ್ರತಿಷ್ಠಾನ, ಕರ್ನಾಟಕ ರಾಜ್ಯ ಘಟಕದಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ಶಿಕ್ಷಕರು ಆಯಾ ವಲಯ/ತಾಲ್ಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳ ಮೂಲಕ ನಿಧಿಗಳ ಕಛೇರಿಗೆ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 31.10.2017 ರ ಒಳಗಾಗಿ ಸಲ್ಲಿಸಲು ತಿಳಿಸಿದೆ.

ಪದವಿ ಪೂರ್ವ ಕಾಲೇಜುಗಳು ಹಾಗೂ ಮೇಲ್ಪಟ್ಟ ವಿದ್ಯಾಸಂಸ್ಥೆಗಳ ಪ್ರಾಂಶುಪಾಲರು ಮತ್ತು ಉಪನ್ಯಾಸಕರುಗಳು ಅವರವರ ಮೇಲಾಧಿಕಾರಿಗಳ ಮುಖಾಂತರ ದಿನಾಂಕ: 31.10.2017 ರೊಳಗೆ ಅರ್ಜಿಗಳನ್ನು ನಿಧಿಗಳ ಕಛೇರಿಗೆ ನೇರವಾಗಿ ಸಲ್ಲಿಸಬೇಕು. ಅರ್ಜಿ ನಮೂನೆಗಳನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಅಂತರ್ಜಾಲದಿಂದ (www.schooleducation.kar.nic.in) ಡೌನ್‌ಲೋಡ್ ಮಾಡಿಕೊಳ್ಳಬಹುದು. ನಿಗದಿ ಪಡಿಸಿರುವ ಅಂತಿಮ ದಿನಾಂಕ. 31.10.2017ರ ನಂತರ ಬರುವ ಅರ್ಜಿಗಳನ್ನು ಹಾಗೂ ಅಪೂರ್ಣ ಮಾಹಿತಿಯ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(ಹೆಚ್.ಆರ್.ಬಸಪ್ಪ)
ಉಪನಿರ್ದೇಶಕರು ಹಾಗೂ ಪ್ರಭಾರಾಧಿಕಾರಿಗಳು